ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯ ಕ್ರಿಶ್ಚಿಯನ್ ಸಮುದಾಯ ಯೋಜನೆ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

404(582) ಮಾನ್ಯ ಕೈಮಗ್ಗ ಮತ್ತು ಜವಳಿ ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಅಧಿಕ ಸಂಖ್ಯೆಯ ಕ್ರಿಶ್ಚಿಯನ್ ಸಮುದಾಯಕ್ಕೆ ಸರ್ಕಾರದ ಯೋಜನೆ ತಲುಪದಿರುವುದಕ್ಕೆ ಕಾರಣವೇನು;

(ಆ) 2018-2019 ರಿಂದ ಇಲ್ಲಿಯವರೆಗೆ ಈ ಸಮುದಾಯಕ್ಕೆ ಯೋಜನೆಗಳು ಮಂಜೂರಾದರೂ ಅದಕ್ಕೆ ಅನುದಾನವಿಲ್ಲವೆಂದು ಕಡತ ಹಿಂತಿರುಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಕ್ರಿಶ್ಚಿಯನ್ ಅಭಿವೃದ್ಧಿ ನಿಗಮ ಮಾಡಲಾಗಿದೆಯೇ; ಮಾಡಿದಲ್ಲಿ ಅದಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ? (ನಿಗಮ ಸ್ಥಾಪನೆಯಾದಾಗಿನಿಂದ ಈವರೆಗಿನ ಅನುದಾನದ ಮಾಹಿತಿ ಒದಗಿಸುವುದು)